## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 558 |
| ಸದಸ್ಯರ ಹೆಸರು | : | ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. |
| ಉತ್ತರಿಸುವ ದಿನಾಂಕ | : | 20/02/2024 |
| ಉತ್ತರಿಸುವ ಸಚಿವರು | : | ಮಾನ್ಯ ಪೌರಾಡಳಿತ ಹಾಗೂ ಹಜ್ ಸಚಿವರು. |

| | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಕಿಣ ಕನ್ನಡ ಜಿಲ್ಲೆ ಬಂಟ್ವಾಳ ತಾಲ್ಲೂಕಿನ ಪುದು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯತ್ ಆಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರಕ್ಕೆ ಈಗಾಗಲೇ ಸಲ್ಲಿಕೆಯಾಗಿದೆಯೇ; | ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲ್ಲೂಕಿನ ಪುದು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತಿನ್ನಾಗಿ ಮೇಲ್ದರ್ಜೆಗೇರಿಸಲು ಜಿಲ್ಲಾಧಿಕಾರಿ, ದಕ್ಷಿಣ ಕನ್ನಡ ಜಿಲ್ಲೆ ರವರು ಸಲ್ಲಿಸಿರುವ ದಾಖಲೆಗಳ ಅನ್ವಯ ನಿರ್ದೇಶಕರು ಪೌರಾಡಳಿತ ನಿರ್ದೇಶನಾಲಯ ರವರು ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿದ್ದು ಪ್ರಸ್ತಾವನೆಯು ಪರಿಶೀಲನೆಯಲ್ಲಿ ಇರುತ್ತದೆ. ಸದರಿ ಪ್ರಸ್ತಾವನೆಗೆ ಆರ್ಥಿಕ ಇಲಾಖೆ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಸಹಮತಿ ಪಡೆದು, ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಸೆಕ್ಷನ್ 349 ರನ್ವಯ ಪರಿಶೀಲಿಸಿ ಮುಂದಿನ ಕ್ರಮವಹಿಸಲಾಗುತ್ತದೆ. |
| ಆ) | ಸಲ್ಲಿಕೆಯಾಗಿದ್ದಲ್ಲಿ, ಪಟ್ಟಣದ ರೀತಿಯಲ್ಲೇ ಈ ಗ್ರಾಮ ಪಂಚಾಯಿತಿ ಬೆಳವಣಿಗೆ ಹೊಂದಿದ್ದು, ಎಲ್ಲ ದೃಷ್ಟಿಯಿಂದಲೂ ನಗರ ಸ್ಥಳೀಯಾಡಳಿತವಾಗಲು ಅರ್ಹವಾಗಿರುವ ಪುದು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯತ್ ಆಗಿ ಮೇಲ್ದರ್ಜೆಗೇರಿಸಲು ಇದುವರೆಗೂ ಸರ್ಕಾರ ಕ್ರಮ ವಹಿಸದಿರಲು ಕಾರಣಗಳೇನು; | |
| ಇ) | ನಗರ ಸ್ಥಳೀಯಾಡಳಿತವಾಗಿ ಮೇಲ್ದರ್ಜೆಗೇರಿಸಲು ಎಲ್ಲಾ ಮಾನದಂಡಗಳು ಹಾಗೂ ಅರ್ಹತೆಗಳನ್ನು ಹೊಂದಿರುವ ಪುದು ಗ್ರಾಮ ಪಂಚಾಯಿತಿಯನ್ನು ಪಟ್ಟಣ ಪಂಚಾಯಿತ್ ಆಗಿ ಯಾವ ಕಾಲಮಿತಿಯೊಳಗೆ ಮೇಲ್ದರ್ಜೆಗೇರಿಸಲಾಗುವುದು? | |

ಸಂಖ್ಯೆ: ನಅಇ 08 ಎಲ್‌ಸಿಕ್ಯೂ 2024.

(ರಹೀಂ ಖಾನ್)

ಮಾನ್ಯ ಪೌರಾಡಳಿತ ಮತ್ತು ಹಜ್ ಸಚಿವರು